# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ: 29ನೇ ನವೆಂಬರ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ.)

### 03. ಗಮನ ಸೆಳೆಯುವ ಸೂಚನೆಗಳು

**ಅ) ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ಕರ್ನಾಟಕ ರಾಜ್ಯದ ದಕ್ಷಿಣ ಭಾಗದಲ್ಲಿರುವ ಕೇರಳ ರಾಜ್ಯದ ಕಾಸರಗೋಡು ತಾಲ್ಲೂಕನ್ನು ವಿಭಜನೆ ಮಾಡಿರುವುದರಿಂದ ರಾಜ್ಯ ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳು ಮಂಜೇಶ್ವರ ತಾಲ್ಲೂಕು ಕಂದಾಯ ಅಧಿಕಾರಿಗಳು ನೀಡಿದ "ಗಡಿನಾಡು ಕನ್ನಡಿಗರ" ಪ್ರಮಾಣ ಪತ್ರವನ್ನು ಮಾನ್ಯ ಮಾಡಲು ನಿರಾಕರಿಸುತ್ತಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀಮತಿ/ಶ್ರೀಯುತರುಗಳಾದ: ವಿ.ಎಸ್. ಉಗ್ರಪ್ಪ, ಮೋಟಮ್ಮ, ಹೆಚ್.ಎಂ. ರೇವಣ್ಣ ಹಾಗೂ ಇತರರು** ರಾಜ್ಯದಲ್ಲಿ ಶಿಕ್ಷಣ ಮತ್ತು ಉದ್ಯೋಗ ನೀಡುವಲ್ಲಿ ಮೀಸಲಾತಿ ಮಿತಿಯನ್ನು ಶೇ 50ರ ಬದಲಿಗೆ ಶೇ 70ರ ಮಿತಿ ನಿಗದಿ ಮಾಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಕ್ಯಾಟಗರಿ-1, 2ಎ, 2ಬಿ, 3ಎ ಮತ್ತು 3ಬಿ ವರ್ಗದ ಜನರಿಗೆ, ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಸೌಲಭ್ಯ ನೀಡಲು ಕ್ರಮಕೈಗೊಳ್ಳುವ ಬಗ್ಗೆ **ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

### 04. ನಿಯಮ 330ರ ಮೇರೆಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)** ಅವರು ರಾಜ್ಯ ಸರ್ಕಾರದ ಅಂಗ ಸಂಸ್ಥೆಗಳಾದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ವಿದ್ಯುತ್ ಮಗ್ಗ ಅಭಿವೃದ್ಧಿ ನಿಗಮಗಳ ಮೂಲಕ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ರಾಜ್ಯದ ಎಲ್ಲಾ ಶಾಲಾ ಮಕ್ಕಳಿಗೆ ನೀಡಲಾಗುತ್ತಿದ್ದ ಸಮವಸ್ತ್ರ ಸರಬರಾಜನ್ನು ಕಡಿತಗೊಳಿಸಿ ಕೇವಲ ಬೆಳಗಾವಿ ವಿಭಾಗದ ಕೆಲವು ಜಿಲ್ಲೆಗಳಿಗೆ ಮಾತ್ರ ಸೀಮಿತಗೊಳಿಸಿರುವ ಹಾಗೂ ಶಿಕ್ಷಣ ಇಲಾಖೆಯು ಅವೈಜ್ಞಾನಿಕವಾಗಿ ದರ ಕಡಿಮೆ ಮಾಡಿರುವುದರಿಂದ, ವಿದ್ಯುತ್ ಮಗ್ಗ ನೇಕಾರರು ಕಂಗಾಲಾಗಿ ಉದ್ಯೋಗವನ್ನು ತೊರೆದು ವಲಸೆ ಹೋಗುವಂತಹ ಪರಿಸ್ಥಿತಿ ನಿರ್ಮಾಣವಾಗಿರುವ ಕುರಿತು ಸದನದಲ್ಲಿ ಪ್ರಸ್ತಾಪಿಸುವುದು.

..2

**೦೫. ಮಹದಾಯಿ ಹಾಗೂ ಕಳಸಾ ಬಂಡೂರಿ ಯೋಜನೆಗಳ ನೀರಿನ ಸಮಸ್ಯೆಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.**

**೦೬. ನಿಯಮ ೬೮ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲೆ ಚರ್ಚೆ**

**ಶ್ರೀಯುತರುಗಳಾದ:**

**ಅಮರನಾಥ ಪಾಟೀಲ್**
**ಬಿ.ಜಿ. ಪಾಟೀಲ್**
**ಕೆ.ಬಿ. ಶಾಣಪ್ಪ**
**ರಘುನಾಥರಾವ್ ಮಲ್ಕಾಪೂರೆ**

ಹೈದ್ರಾಬಾದ್-ಕರ್ನಾಟಕ ಭಾಗದ ಆರು ಜಿಲ್ಲೆಗಳಿಗೆ ಸಂವಿಧಾನದ ಕಲಂ 371(ಜೆ) ತಿದ್ದುಪಡಿ ತಂದು ವಿಶೇಷವಾದಂತಹ ಸ್ಥಾನಮಾನ ನೀಡಲಾಗಿದ್ದರೂ ಈ ಭಾಗದ ಜನರಿಗೆ ವೃತ್ತಿಪರ ಶಿಕ್ಷಣದಲ್ಲಿ ಮೀಸಲಾತಿ, ಉದ್ಯೋಗ ಹಾಗೂ ಮುಂಬಡ್ತಿಗಳಲ್ಲಿ ಮೀಸಲಾತಿ ಮತ್ತು ಮೂಲ ಸೌಕರ್ಯ ಅಭಿವೃದ್ಧಿಗಾಗಿ ಇದರ ಅನುಷ್ಠಾನವನ್ನು ಇನ್ನೂ ಜಾರಿಯಾಗದಿರುವ ಕುರಿತು ಪ್ರಸ್ತಾಪಿಸುವುದು.

**೦೭. ಅರ್ಧ ಗಂಟೆ ಕಾಲಾವಧಿ ಚರ್ಚೆ**

ಹೆದ್ದಾರಿ ಟೋಲ್‌ನಲ್ಲಿ ಆಂಬುಲೆನ್ಸ್ ಹಾಗೂ ಗಣ್ಯ ವ್ಯಕ್ತಿಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸುವ ಕುರಿತು ದಿನಾಂಕ: 22.11.2016ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 19(222)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಬಸವರಾಜ ಹೊರಟ್ಟಿ, ಆರ್. ಚೌಡರೆಡ್ಡಿ ತೂಪಲ್ಲಿ ಹಾಗೂ ಇತರರಿಂದ** ಅರ್ಧಗಂಟೆ ಕಾಲಾವಧಿ ಚರ್ಚೆ.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**